ಕರ್ನಾಟಕ ಸರ್ಕಾರದ ನಡವಳಿ

ವಿಷಯ: 14ನೇ ಹಣಕಾಸು ಆಯೋಗದ ಸಾಮರ್ಥ್ಯ ಮೂಲ ಅನುದಾನದ (General Basic Grant) ಹಂಚಿಕೆ ಮತ್ತು ಬಳಕೆ ಕುರಿತು ಅನುಮೋದನೆಯಾಗಿರುವ ಎಲ್ಲಾ ಕಾಮಗಾರಿಗಳನ್ನು ಮೆ॥ ಕೆ.ಆರ್.ಐ.ಡಿ.ಎಲ್. ಸಂಸ್ಥೆಯ ಮುಖಾಂತರ ಕೈಗೊಳ್ಳಲು ಕೆ.ಟಿ.ಪಿ.ಪಿ. ಕಾಯ್ದೆಯ ಕಲಂ 4(ಜಿ) ರಡಿ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ: 1. ಸರ್ಕಾರದ ಪತ್ರ ಸಂಖ್ಯೆ: ನಅಇ 294 ಎಂಎನ್‌ಯು 2017, ದಿನಾಂಕ: 24-05-2017.

2. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಪತ್ರ ಸಂಖ್ಯೆ: ಆ/ಪಿಆರ್/6646/2017-18, ದಿನಾಂಕ: 05-01-2018.

3. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಪತ್ರ ಸಂಖ್ಯೆ: ಆ/ಪಿಆರ್/7682/2017-18, ದಿನಾಂಕ: 08-02-2018.

* * * * *

ಪ್ರಸ್ತಾವನೆ:

ಮೇಲೆ (1) ರಲ್ಲಿ ಓದಲಾದ ದಿನಾಂಕ: 24-05-2017ರ ಸರ್ಕಾರದ ಪತ್ರದಲ್ಲಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ 2017-18ನೇ ಸಾಲಿನ ಆಯವ್ಯಯವನ್ನು ಈ ಕೆಳಕಂಡ ಷರತ್ತುಗಳಿಗೆ ಹೊಂದಾಣಿಕೆ ಮಾಡಿಕೊಂಡು ವ್ಯವಹರಿಸುವಂತೆ ಕರ್ನಾಟಕ ಮುನಿಸಿಪಲ್ ಕಾರ್ಪೋರೇಷನ್ ಕಾಯ್ದೆ 1976ರ ಕಲಂ 170(1)(2) ರನ್ವಯ ಅನುಮೋದನೆಯನ್ನು ನೀಡಲಾಗಿರುತ್ತದೆ.

(1) ಬಿ.ಬಿ.ಎಂ.ಪಿ.ಯ ಆಯವ್ಯಯದಲ್ಲಿನ ಸರ್ಕಾರದ ಅನುದಾನವು, ರಾಜ್ಯದ ಆಯವ್ಯಯದಲ್ಲಿ ಬಿ.ಬಿ.ಎಂ.ಪಿ.ಗೆ ಒದಗಿಸಿರುವ ಅನುದಾನಕ್ಕನುಗುಣವಾಗಿರತಕ್ಕದ್ದು.

(2) ರಾಜ್ಯ ಸರ್ಕಾರದಿಂದ ಒದಗಿಸಲಾದ ಅನುದಾನದಿಂದ ಅನುಮೋದನೆಗೊಂಡ ಕ್ರಿಯಾಯೋಜನೆಯ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸತಕ್ಕದ್ದು.

(3) ಆಯವ್ಯಯದಲ್ಲಿ ಜಮೆ ಮತ್ತು ಖರ್ಚುಗಳನ್ನು ಸಮತೋಲನವನ್ನು ಕಾಪಾಡಿಕೊಳ್ಳತಕ್ಕದ್ದು.

2. ಮೇಲೆ (2) ಮತ್ತು (3) ರಲ್ಲಿ ಓದಲಾದ ದಿನಾಂಕ: 05-01-2018 ಮತ್ತು 08-02-2018ರ ಪತ್ರಗಳಲ್ಲಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆಯುಕ್ತರು, ಸರ್ಕಾರದ ಆದೇಶ ಸಂಖ್ಯೆ: ನಅಇ 294 ಎಂಎನ್‌ಯು 2017, ದಿನಾಂಕ: 24-05-2017 ರಲ್ಲಿ 2017-18ನೇ ಸಾಲಿನ ಪಾಲಿಕೆಯ ಆಯವ್ಯಯವನ್ನು ಅನುಮೋದಿಸಿದ್ದು, ಈ ಆದೇಶದಲ್ಲಿರುವ ಅನುಬಂಧ-02 ರಲ್ಲಿ 14ನೇ ಹಣಕಾಸು ಆಯೋಗದ ಅನುದಾನವು 09 ಉದ್ದೇಶಗಳಾದ (1) ಕುಡಿಯುವ ನೀರು ಕಾಮಗಾರಿಗಳು, (2) ಸಾಮೂಹಿಕ/ಸಾರ್ವಜನಿಕ ಶೌಚಾಲಯ ಮತ್ತು ಸೆಪ್ಟೇಜ್‌ಗಳ ನಿರ್ವಹಣೆ, (3) ಒಳಚರಂಡಿ ವ್ಯವಸ್ಥೆ ಕಾಮಗಾರಿಗಳು, (4) ಘನತ್ಯಾಜ್ಯ ವಸ್ತು ನಿರ್ವಹಣೆ, (5) ಮಳೆ ನೀರು ಚರಂಡಿ ಕಾಮಗಾರಿ, (6) ಸಮುದಾಯ ಭವನಗಳ ನಿರ್ವಹಣೆ (ಸಾರ್ವ ಒಳಗೊಂಡಂತೆ), (7) ರಸ್ತೆ ಮತ್ತು

ಪಾದಚಾರಿ ಮಾರ್ಗಗಳ ನಿರ್ವಹಣೆ, (8) ವಿದ್ಯುತ್ ಬೀದಿ ದೀಪಗಳ ಅಳವಡಿಕೆ/ನಿರ್ವಹಣೆ/ವಿದ್ಯುತ್ ಉಳಿತಾಯದ ಕ್ರಮಗಳು ಮತ್ತು (9) ಸ್ಮಶಾನ/ಚಿತಾಗಾರ/ಕಬ್ಬೇರಿಗಳ ನಿರ್ವಹಣೆ ಕಾರ್ಯಗಳಿಗೆ ರೂ.265.30 ಕೋಟಿಗಳಿಗೆ ಅನುಮೋದನೆ ನೀಡಲಾಗಿರುತ್ತದೆ.

3. ಅನುಮೋದನೆಯಾಗಿರುವ ಕಾಮಗಾರಿಗಳನ್ನು ತುರ್ತಾಗಿ ಕೈಗೊಂಡು ಅನುಷ್ಠಾನಗೊಳಿಸಬೇಕಾಗಿರುವುದರಿಂದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಕೌನ್ಸಿಲ್ ಸಭೆಯ ವಿಷಯದ ಸಂಖ್ಯೆ: 23(193), ದಿನಾಂಕ: 30-08-2017 ರಲ್ಲಿ ಚರ್ಚಿಸಲಾಗಿದ್ದು, ಈ ವಿಚಾರದಲ್ಲಿ ಸರ್ಕಾರಕ್ಕೆ 2017-18ನೇ ಸಾಲಿನ 14ನೇ ಹಣಕಾಸು ಆಯೋಗದಲ್ಲಿ ಅನುಮೋದನೆಯಾಗಿರುವ ಎಲ್ಲಾ ಉದ್ದೇಶಗಳ ಕಾಮಗಾರಿಗಳಿಗೆ ಮೆ॥ ಕೆ.ಆರ್.ಐ.ಡಿ.ಎಲ್. ಸಂಸ್ಥೆಯಿಂದ ಕೆ.ಟಿ.ಪಿ.ಪಿ. ಕಾಯ್ದೆ 4(ಜಿ) ವಿನಾಯಿತಿ ಅಡಿ ಕೈಗೊಳ್ಳಲು ಅಗತ್ಯ ಕ್ರಮವಹಿಸುವುದೆಂದು ತೀರ್ಮಾನಿಸಲಾಗಿರುತ್ತದೆ. 14ನೇ ಹಣಕಾಸು ಆಯೋಗದಲ್ಲಿ ಅನುಮೋದನೆಯಾಗಿರುವ ಕಾಮಗಾರಿಗಳು ಕೆ.ಟಿ.ಪಿ.ಪಿ. ಕಾಯ್ದೆಯಂತೆ ಟೆಂಡರ್ ಕರೆದು ಪ್ರಾರಂಭಿಸಲು ಹಾಗೂ ಅನುಷ್ಠಾನಗೊಳಿಸಲು ಹೆಚ್ಚಿನ ಕಾಲಾವಧಿ ಅಗತ್ಯವಿರುತ್ತದೆ. ಸರ್ಕಾರದ ಪತ್ರ ಸಂಖ್ಯೆ: ನಅಇ 151 ಎಸ್ಎಫ್ಸಿ 2017, ದಿನಾಂಕ: 14-07-2017 ರಲ್ಲಿ, 2016-17ನೇ ಸಾಲಿನಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಬಿಡುಗಡೆ ಮಾಡಿರುವ 14ನೇ ಹಣಕಾಸು ಆಯೋಗದ ಸಾಮಾನ್ಯ ಮೂಲ ಅನುದಾನದ (General Basic Grant) ಮತ್ತು ಸಾಮಾನ್ಯ ಕಾರ್ಯನಿರ್ವಹಣಾ (General Performance Grants) ಅನುದಾನದಡಿ ಕೈಗೊಳ್ಳುವ ಕಾಮಗಾರಿಗಳಲ್ಲಿ ಅತ್ಯಂತ ತುರ್ತು ಹಾಗೂ ಅತೀ ಅವಶ್ಯವೆಂದು ಪಾಲಿಕೆಯಲ್ಲಿ ನಿರ್ಧರಿಸಿ, ಕೆ.ಟಿ.ಪಿ.ಪಿ. ಕಾಯ್ದೆಯಿಂದ ವಿನಾಯಿತಿ ನೀಡಿರುವ ಕಾಮಗಾರಿಗಳನ್ನು ಮೆ॥ ಕೆ.ಆರ್.ಐ.ಡಿ.ಎಲ್. ಸಂಸ್ಥೆ ಮೂಲಕ ಅನುಷ್ಠಾನಗೊಳಿಸಲು ಅಗತ್ಯ ಕ್ರಮಕೈಗೊಳ್ಳಲು ನಿರ್ದೇಶಿಸಲಾಗಿದೆ. 2017-18ನೇ ಸಾಲಿನ ವರ್ಷವು ಅಂತ್ಯವಾಗುತ್ತಿರುವ ಹಿನ್ನೆಲೆಯಲ್ಲಿ ಹಾಗೂ ಫೆಬ್ರವರಿ 2018ರ ಮಾಹೆಯಲ್ಲಿ ಕಾಮಗಾರಿಗಳನ್ನು ಆರ್ಥಿಕ ಸಾಲಿನಲ್ಲಿ ಅನುಷ್ಠಾನಗೊಳಿಸಲು ಉಳಿದಿರುವ ಕನಿಷ್ಠ ದಿನಗಳಾಗಿದ್ದು ಮತ್ತು ಶೀಘ್ರವಾಗಿ ಅನುಷ್ಠಾನಗೊಳಿಸಲು ಕಾಮಗಾರಿಗಳನ್ನು ಮೆ॥ ಕೆ.ಆರ್.ಐ.ಡಿ.ಎಲ್. ಸಂಸ್ಥೆಯ ವತಿಯಿಂದ ಕೆ.ಟಿ.ಪಿ.ಪಿ. ಕಾಯ್ದೆ 4(ಜಿ) ವಿನಾಯಿತಿ ಅಡಿ ಕೈಗೊಳ್ಳಲು ಸರ್ಕಾರದ ಅನುಮೋದನೆ ನೀಡುವಂತೆ ಕೋರಿರುತ್ತಾರೆ.

4. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು, ಇವರು ಸಲ್ಲಿಸಿರುವ ಪ್ರಸ್ತಾಪನೆಯನ್ನು ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ನಅಇ 23 ಎಂಎಸ್ಪಿ 2018,
ಬೆಂಗಳೂರು, ದಿನಾಂಕ: 15-06-2018.

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ಸರ್ಕಾರದ ಪತ್ರ ಸಂಖ್ಯೆ: ನಅಇ 294 ಎಂಎಸ್ಯು 2017, ದಿನಾಂಕ: 24-05-2017 ರಲ್ಲಿ 2017-18ನೇ ಸಾಲಿನ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆಯವ್ಯಯಕ್ಕೆ ಅನುಮೋದನೆಯನ್ನು ನೀಡಿದ್ದು, ಆಯವ್ಯಯದಲ್ಲಿನ 14ನೇ ಹಣಕಾಸು ಆಯೋಗದ ಸಾಮಾನ್ಯ ಮೂಲ ಅನುದಾನ (General Basic Grant) ಅಡಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಅನುದಾನದಲ್ಲಿ ರೂ.265.30 (ರೂ.ಇನ್ನೂರ ಅರವತ್ತೈದು ಕೋಟಿ ಮೂವತ್ತು ಲಕ್ಷಗಳು ಮಾತ್ರ) ಗಳ ವೆಚ್ಚದಲ್ಲಿ ಕೈಗೊಳ್ಳುವ ಕಾಮಗಾರಿಗಳಿಗೆ (ಅನುಬಂಧದಲ್ಲಿರುವಂತೆ ಮಾತ್ರ) ಅನುಮೋದನೆಯನ್ನು ನೀಡಿದ್ದು, ಈ ಆದೇಶದೊಂದಿಗೆ ಲಗತ್ತಿಸಿರುವ ರೂ.2.00

ಕೋಟಿಗಳ ಮೊತ್ತದವರೆಗಿನ ಕಾಮಗಾರಿಗಳನ್ನು ನೇರವಾಗಿ ಮೆ॥ ಕೆ.ಆರ್.ಐ.ಡಿ.ಎಲ್. ಸಂಸ್ಥೆಯ ಮೂಲಕ ಕೈಗೊಳ್ಳಲು ಸಾಮಾನ್ಯ ವಿನಾಯಿತಿಯನ್ನು ನೀಡಲಾಗಿರುತ್ತದೆ. ಹಾಗೂ ರೂ.2.00 ಕೋಟಿ ಮೀರಿದ ಕಾಮಗಾರಿಗಳನ್ನು ಟೆಂಡರ್ ಮೂಲಕ ಕೈಗೊಳ್ಳಲು ಈ ಕೆಳಕಂಡ ಷರತ್ತಿಗೊಳಪಟ್ಟು ಸರ್ಕಾರದ ಅನುಮೋದನೆಯನ್ನು ನೀಡಲಾಗಿದೆ.

1. ಮೆ॥ ಕೆ.ಆರ್.ಐ.ಡಿ.ಎಲ್. ಸಂಸ್ಥೆಯು ಮೇಲಿನ ಕಾಮಗಾರಿಗಳನ್ನು ತನ್ನದೇ ಆಂತರಿಕ ಸಂಪನ್ಮೂಲಗಳಿಂದ ಕಾರ್ಯಗೊಳಿಸತಕ್ಕದ್ದು. ಬೇರೆಯವರ ಮುಖಾಂತರ ಕೈಗೊಳ್ಳುವಂತಿಲ್ಲ.
2. ಯಾವುದೇ ಕಾಮಗಾರಿಗಳನ್ನು Spilt ಮಾಡಿ ಕೆ.ಆರ್.ಐ.ಡಿ.ಎಲ್.ಗೆ ವಹಿಸಬಾರದು.
3. ಉತ್ತಮ ಗುಣಮಟ್ಟದ ಕಾಮಗಾರಿಗಳನ್ನು ಕೈಗೊಳ್ಳತಕ್ಕದ್ದು.
4. ಈ ಕಾಮಗಾರಿಗಳಿಗೆ ತಗಲುವ ವೆಚ್ಚವನ್ನು 2017-18ನೇ ಸಾಲಿನಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯು ನಿಗಧಿಪಡಿಸಿರುವ ಸ್ವಂತ ಅನುದಾನದಿಂದ ಭರಿಸುವುದು.
5. ಮೇಲಿನ ಕಾಮಗಾರಿಗೆ 3rd Party Quality Monitors ಗಳನ್ನು ನೇಮಿಸಿಕೊಂಡು ಉತ್ತಮ ಗುಣಮಟ್ಟದಿಂದ ಕಾಮಗಾರಿಯನ್ನು ಅನುಷ್ಠಾನಗೊಳಿಸಲು ಕ್ರಮವಹಿಸತಕ್ಕದ್ದು.
6. ಕಾಮಗಾರಿಗಳ ಅಂಶಗಳ ವಿಶಿಷ್ಟ ವಿವರಣೆಯು ಲೋಕೋಪಯೋಗಿ ಇಲಾಖೆಯ ದರಪಟ್ಟಿಯಲ್ಲಿ ಸೂಚಿಸಿರುವಂತೆ ಇರತಕ್ಕದ್ದು.
7. ಸದರಿ ಕಾಮಗಾರಿಗಳನ್ನು ಭಾಗಶಃ ಅಥವಾ ಪೂರ್ಣವಾಗಿ ಇತರ ಯಾವುದೇ ಅನುದಾನದಲ್ಲಿ ಅನುಷ್ಠಾನಗೊಳಿಸಲಾಗುತ್ತಿಲ್ಲ ಎಂದು ಧೃಢೀಕರಿಸತಕ್ಕದ್ದು.
8. ಕಾಮಗಾರಿಗಳು ಈಗಾಗಲೇ ಪೂರ್ಣಗೊಂಡಿರುವ ಕಾಮಗಾರಿಗಳಲ್ಲಿ ಸೇರಿರುವುದಿಲ್ಲ ಎಂದು ಧೃಢೀಕರಿಸತಕ್ಕದ್ದು.
9. ಸದರಿ ಕಾಮಗಾರಿಗಳ ಅನುಷ್ಠಾನದಿಂದ ಇತರ ಯಾವುದೇ ಕಾಮಗಾರಿಯ ಅನುಷ್ಠಾನದಿಂದ ನಿರ್ವಹಣಾ ಅವಧಿ (Maintenance Period) ಅಥವಾ ದೋಷ ಬಾಧ್ಯತಾ ಅವಧಿ (Defects Liability Period) ಯನ್ನು ಉಲ್ಲಂಘಿಸಿಲ್ಲವೆಂದು ಖಾತ್ರಿ ಪಡಿಸಿಕೊಳ್ಳುವುದು.
10. ಸದರಿ ಕಾಮಗಾರಿಗಳನ್ನು ಪ್ರಾರಂಭಿಸುವುದಕ್ಕಿಂತ ಮುಂಚೆ, ನಂತರದ ಹಾಗೂ ಮಧ್ಯದಲ್ಲಿಯೂ ಸಹ 3 ಹಂತದ ಭಾವಚಿತ್ರಗಳನ್ನು GPS Co-ordinate ಯೊಂದಿಗೆ ಮಾಡಿಕೊಂಡು ಭಾವಚಿತ್ರಗಳನ್ನು ಕಡತದಲ್ಲಿ ನಿರ್ವಹಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯು ಸಂಖ್ಯೆ: ಆಇ 308 ವೆಚ್ಚ-12/2018, ದಿನಾಂಕ: 19-03-2018 ರಂದು ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ.

(ಪಿ.ಎನ್. ಪ್ರಭಾಕರ್)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ (ಬಿ.ಬಿ.ಎಂ.ಪಿ.)

ಇವರಿಗೆ:

1. ಮಹಾಲೇಖಪಾಲರು, ಲೆಕ್ಕ ಪರಿಶೋಧನೆ/ಲೆಕ್ಕಪತ್ರ, ಕರ್ನಾಟಕ, ಬೆಂಗಳೂರು.
2. [illegible]

3. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
5. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
6. ವಿಶೇಷ ಆಯುಕ್ತರು (ಯೋಜನೆ), ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
7. ಪ್ರಧಾನ ಅಭಿಯಂತರರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
8. ಮುಖ್ಯ ಲೆಕ್ಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
9. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, (ವೆಚ್ಚ 3 ಮತ್ತು 9) ವಿಧಾನಸೌಧ, ಬೆಂಗಳೂರು.
10. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ.
11. ಸರ್ಕಾರದ ಉಪ ಕಾರ್ಯದರ್ಶಿಗಳು-3 ರವರ ಆಪ್ತ ಸಹಾಯಕರು, ನಗರಾಭಿವೃದ್ಧಿ ಇಲಾಖೆ.
12. ಅಧೀಕ್ಷಕ ಅಭಿಯಂತರರು, ತಾಂತ್ರಿಕ ಕೋಶ, ನಗರಾಭಿವೃದ್ಧಿ ಇಲಾಖೆ.
13. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.